ಕರ್ನಾಟಕ ಸರ್ಕಾರ

ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ,ಸಂಪಿಗೆ ರಸ್ತೆ, 18ನೇ ಕ್ರಾಸ್, ಮಲ್ಲೇಶ್ವರಂ, ಬೆಂಗಳೂರು-12

ಸಂಖ್ಯೆ: ಪಪೂಶಿ/ಪರೀಕ್ಷೆ/ಖಾ.ಅ.ನೋ/2018-19 ದಿನಾಂಕ: 19.09.2018.

## ಸುತ್ತೋಲೆ

**ವಿಷಯ:** ಪದವಿ ಪೂರ್ವ ಶಿಕ್ಷಣ ಇಲಾಖೆಯ 2019ರ ದ್ವಿತೀಯ ಪಿಯುಸಿ ಖಾಸಗಿ ಅಭ್ಯರ್ಥಿಗಳಾಗಿ ನೋಂದಾಯಿಸಿಕೊಳ್ಳಲು ಶುಲ್ಕ ಸಂದಾಯ ಮಾಡಲು ಕೊನೆಯ ದಿನಾಂಕವನ್ನು ವಿಸ್ತರಿಸುವ ಬಗ್ಗೆ

**ಉಲ್ಲೇಖ:** ಈ ಕಛೇರಿಯ ಅಧಿಸೂಚನೆ ಸಂಖ್ಯೆ: ಪಪೂಶಿ/ಪರೀಕ್ಷೆ/ಖಾ.ಅ.ನೋ/ 2018-19 ದಿನಾಂಕ: 28.07.2018.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ ಮಾರ್ಚ್ 2019ರಲ್ಲಿ ನಡೆಸುವ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗೆ ಖಾಸಗಿ (Private) ಅಭ್ಯರ್ಥಿಗಳು ಪರೀಕ್ಷಾ ಶುಲ್ಕ ಸಂದಾಯ ಮಾಡಲು ಉಲ್ಲೇಖದನ್ವಯ ದಂಡ ಶುಲ್ಕವಿಲ್ಲದೆ ದಿನಾಂಕ 05.09.2018 ಹಾಗೂ ದಂಡ ಸಹಿತ ಶುಲ್ಕದೊಂದಿಗೆ 18.09.2018ನ್ನು ಕೊನೆಯ ದಿನಾಂಕವಾಗಿ ನಿಗದಿಪಡಿಸಲಾಗಿತ್ತು. ವಿದ್ಯಾರ್ಥಿಗಳ ಹಾಗೂ ಪೋಷಕರ ಮನವಿಯ ಮೇರೆಗೆ ಮಾರ್ಚ್ 2019ರ ದ್ವಿತೀಯ ಪಿಯುಸಿ ವಾರ್ಷಿಕ ಪರೀಕ್ಷೆಗೆ ಖಾಸಗಿ ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು / ಪರೀಕ್ಷಾ ಶುಲ್ಕ ಸಂದಾಯ ಮಾಡಲು ಕಡೆಯ ದಿನಾಂಕವನ್ನು ಈ ಕೆಳಗಿನಂತೆ ವಿಸ್ತರಿಸಲಾಗಿದೆ.

| ವಿದ್ಯಾರ್ಥಿಗಳು ಪರೀಕ್ಷಾ ಶುಲ್ಕ ಪಾವತಿಸಲು ವಿಸ್ತರಿಸಲಾದ ಕಡೇ ದಿನಾಂಕ | ಕಾಲೇಜಿನವರು ವಿಸ್ತರಿಸಲಾದ ದಿನಾಂಕಗಳಲ್ಲಿ ಸ್ವೀಕರಿಸಿದ ಪರೀಕ್ಷಾ ಶುಲ್ಕವನ್ನು ಖಜಾನೆಗೆ ಸಂದಾಯ ಮಾಡಬೇಕಾದ ದಿನಾಂಕ | ಕಾಲೇಜಿನವರು ಪರೀಕ್ಷಾ ಅರ್ಜಿಗಳನ್ನು ಜಿಲ್ಲಾ ಉಪನಿರ್ದೇಶಕರ ಕಛೇರಿಗೆ ತಲುಪಿಸುವ ದಿನಾಂಕ |
|---|---|---|
| **01.10.2018** | **03.10.2018** | **04.10.2018** |

**ಅರ್ಜಿ ಸ್ವೀಕರಿಸಲು ವಿಸ್ತರಿಸಲಾದ ದಿನಾಂಕಗಳಲ್ಲಿ ಸ್ವೀಕರಿಸಿ ಪಾವತಿಸಬೇಕಾದ ಶುಲ್ಕ ವಿವರ**

| ಇಲಾಖಾ ಸಮಸಂಖ್ಯೆ ಮೂಲ ಅಧಿಸೂಚನೆ ದಿನಾಂಕ 28.07.2018 ರನ್ವಯ | ಸುತ್ತೋಲೆಯಲ್ಲಿ ವಿವರಿಸಿದಂತೆ ಶುಲ್ಕ |
|---|---|
| ಇಲಾಖಾ ಸಮಸಂಖ್ಯೆ ಮೂಲ ಅಧಿಸೂಚನೆ ದಿನಾಂಕ 28.07.2018 ರನ್ವಯ ದಿನಾಂಕ: 06.09.2018 ರಿಂದ ದಿನಾಂಕ 18.09.2018 ರವರೆಗಿನ ದಂಡ ಶುಲ್ಕ | ರೂ 500/- |
| ಪ್ರಸ್ತುತ ವಿಸ್ತರಿಸಿದ ದಿನಾಂಕ 19.09.2018 ರಿಂದ 01.10.2018 ರವರೆಗೆ | ದಿನವೊಂದಕ್ಕೆ ರೂ 70/- ರಂತೆ |

ಸದರಿ ಪರೀಕ್ಷೆಗಳಿಗೆ ಖಾಸಗಿ (Private) ಅಭ್ಯರ್ಥಿಗಳು ಪರೀಕ್ಷಾ ಶುಲ್ಕ ಪಾವತಿಸಲು **ಇದೇ ಅಂತಿಮ ಅವಕಾಶವಾಗಿರುತ್ತದೆ.** ಆದಕಾರಣ ಮೇಲೆ ತಿಳಿಸಿರುವ ದಿನಾಂಕದ ನಂತರ ಕಾಲೇಜಿನ ಪ್ರಾಂಶುಪಾಲರು ಯಾವುದೇ ಖಾಸಗಿ ಅಭ್ಯರ್ಥಿಗಳ ಅರ್ಜಿಗಳನ್ನು ಸ್ವೀಕರಿಸಕೂಡದು. ಪರೀಕ್ಷಾ ಶುಲ್ಕ ಪಾವತಿಸುವ ದಿನಾಂಕವನ್ನು ಮತ್ತೊಮ್ಮೆ ವಿಸ್ತರಿಸಲಾಗುವುದಿಲ್ಲ.

ಜಿಲ್ಲಾ ಉಪನಿರ್ದೇಶಕರು ಒಂದೇ ಕಂತಿನಲ್ಲಿ ಎಲ್ಲಾ ಖಾಸಗಿ (Private) ಅಭ್ಯರ್ಥಿಗಳ ಅರ್ಜಿಗಳನ್ನು ಖುದ್ದಾಗಿ ಇಲಾಖೆಗೆ ದಿನಾಂಕ 06.10.2018 ರಂದು ಕೇಂದ್ರ ಕಛೇರಿಗೆ ಸಲ್ಲಿಸುವುದು.

ಮಾನ್ಯ ನಿರ್ದೇಶಕರ ಆದೇಶದ ಮೇರೆಗೆ,

19/9/2018

ಜಂಟಿ ನಿರ್ದೇಶಕರು(ಪರೀಕ್ಷೆ),
ಪದವಿ ಪೂರ್ವ ಶಿಕ್ಷಣ ಇಲಾಖೆ.

**ಪ್ರತಿಯನ್ನು ಅಗತ್ಯಕ್ರಮಕ್ಕಾಗಿ :**

1. ಜಿಲ್ಲಾ ಉಪನಿರ್ದೇಶಕರು, ಪದವಿ ಪೂರ್ವ ಶಿಕ್ಷಣ ಇಲಾಖೆ ರವರಿಗೆ.
2. ರಾಜ್ಯದ ಎಲ್ಲಾ ಸರ್ಕಾರಿ / ಅನುದಾನಿತ / ಅನುದಾನ ರಹಿತ ಪದವಿ ಪೂರ್ವ ಕಾಲೇಜುಗಳ ಪ್ರಾಚಾರ್ಯರಿಗೆ. (ವಿದ್ಯಾರ್ಥಿಗಳಿಗೆ ಈ ಕುರಿತು ಸೂಕ್ತ ನಿರ್ದೇಶನ ನೀಡಲು)
3. ಇಲಾಖಾ ಇ-ಆಡಳಿತ ಶಾಖೆ, ಪದವಿ ಪೂರ್ವ ಶಿಕ್ಷಣ ಇಲಾಖೆ,

ಪ್ರತಿಯನ್ನು ಮಾಹಿತಿಗಾಗಿ :

1. ಜಂಟಿನಿರ್ದೇಶಕರು (ಪರೀಕ್ಷೆ) ಪದವಿ ಪೂರ್ವ ಶಿಕ್ಷಣ ಇಲಾಖೆ
2. ಕಛೇರಿ ಪ್ರತಿ.